ಆ) ಹಾಗಿದ್ದಲ್ಲಿ, ಕಾರಣಗಳೇನು? (ಪೂರ್ಣ ಮಾಹಿತಿ ನೀಡುವುದು)?

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು) :

ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಆಚರಿಸಲಾಗುವ ರಾಜ್ಯದ ಮಹಾನ್ ವ್ಯಕ್ತಿಗಳ ಜಯಂತಿ ಆಚರಣೆಗೆ ಸರ್ಕಾರದಿಂದ ಹಣ ಬಿಡುಗಡೆ ಮಾಡಲಾಗುತ್ತಿದೆ.

ಆ) ಉದ್ಭವಿಸುವುದಿಲ್ಲ.

ಪ್ರತಿದಿನ ಉತ್ಪಾದನೆಯಾಗುವ ಇ-ತ್ಯಾಜ್ಯ ವಿಲೇವಾರಿ

588 (188) ಶ್ರೀ ರಾಮಲಿಂಗಾ ರೆಡ್ಡಿ (ಬಿ.ಟಿ.ಎಂ.ಲೇಔಟ್) : ಮಾನ್ಯ ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಯೋಜನೆ ಮತ್ತು ಸಾಂಖ್ಯಿಕ ಸಚಿವರು) :

ಅ) ಬೆಂಗಳೂರು ನಗರದಲ್ಲಿ ಪ್ರತಿ ದಿನ ಉಂಟಾಗುವ ಇ-ತ್ಯಾಜ್ಯ ಅಂದರೆ ಹಳೆಯ ಎಲೆಕ್ಟ್ರಾನಿಕ್ಸ್ ಉಪಕರಣಗಳು ಇತ್ಯಾದಿ ಪ್ರಮಾಣವೆಷ್ಟು?

ಆ) ಇ-ತ್ಯಾಜ್ಯ ಸರಿಯಾಗಿ ವಿಲೇವಾರಿಯಾಗದೆ ಪರಿಸರಕ್ಕೆ ಧಕ್ಕೆಯುಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಇ-ತ್ಯಾಜ್ಯವನ್ನು ವಿಲೇವಾರಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಎಸ್. ಶಿವಣ್ಣ (ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಯೋಜನೆ ಮತ್ತು ಸಾಂಖ್ಯಿಕ ಸಚಿವರು) :

ಅ) ಬೆಂಗಳೂರು ನಗರದಲ್ಲಿ ಪ್ರತಿದಿನ ಸುಮಾರು 6.74 ಮೆಟ್ರಿಕ್ ಟನ್ ಇ-ತ್ಯಾಜ್ಯ ಉತ್ಪತ್ತಿಯಾಗುತ್ತಿದೆ.

ಆ) ಅಂತಹ ಯಾವುದೇ ಘಟನೆ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಇ)

i) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಇದುವರೆಗೆ 40 ಉದ್ದಿಮೆಗಳಿಗೆ ಇ-ತ್ಯಾಜ್ಯವನ್ನು

ಸಂಗ್ರಹಿಸಲು ಮತ್ತು ಸಂಸ್ಕರಿಸಲು ಪರವಾನಿಗೆಯನ್ನು ನೀಡಿರುತ್ತದೆ. ಇವುಗಳಲ್ಲಿ 20 ಉದ್ದಿಮೆಗಳು ಈಗಾಗಲೇ ಇ–ತ್ಯಾಜ್ಯವನ್ನು ಸಂಗ್ರಹಿಸಿ ಸಂಸ್ಕರಿಸುವ ಕಾರ್ಯಾರಂಭ ಮಾಡಿವೆ. ಈ 20 ರಲ್ಲಿ 16 ಘಟಕಗಳು ಬೆಂಗಳೂರು ನಗರವೊಂದರಲ್ಲೇ ಕಾರ್ಯಾಚರಣೆಯಲ್ಲಿವೆ ಹಾಗೂ ಕೋಲಾರ, ಚಿಕ್ಕಬಳ್ಳಾಪುರ, ಮೈಸೂರು ಮತ್ತು ರಾಮನಗರ ಗಳಲ್ಲಿ ತಲಾ ಒಂದರಂತೆ ಕಾರ್ಯನಿರ್ವಹಿಸುತ್ತಿವೆ. ಉಳಿದ 20 ಘಟಕಗಳು ಇನ್ನೂ ಕಾರ್ಯಾರಂಭ ಮಾಡಬೇಕಾಗಿವೆ.

ii) ಹೊಸ ಇ–ತ್ಯಾಜ್ಯ (ನಿರ್ವಹಣೆ ಮತ್ತು ನಿಭಾವಣೆ) ನಿಯಮಗಳು 2011 ದಿನಾಂಕ: 01.05.2012 ರಿಂದ ಜಾರಿಗೆ ಬಂದಿರುತ್ತದೆ. ಈ ಸಂಬಂಧ 10 ಇ–ತ್ಯಾಜ್ಯ ಉತ್ಪಾದಕರು ಮತ್ತು ಪುನರ್ ಬಳಕೆದಾರರನ್ನೊಳಗೊಂಡ ಕಾರ್ಯಾಗಾರಗಳನ್ನು ನಡೆಸಲಾಗಿದೆ ಮಂಡಳಿಯ ಎಲ್ಲಾ 44 ಪ್ರಾದೇಶಿಕ ಪರಿಸರ ಅಧಿಕಾರಿಗಳು ತಮ್ಮ ತಮ್ಮ ವ್ಯಾಪ್ತಿಯಲ್ಲಿ ಇ–ತ್ಯಾಜ್ಯ (ನಿರ್ವಹಣೆ ಮತ್ತು ನಿಭಾವಣೆ) ನಿಯಮಗಳು 2011ರ ಅನುಷ್ಠಾನದ ಬಗ್ಗೆ ಕಾರ್ಯಾಗಾರ ಗಳನ್ನು ನಡೆಸುತ್ತಿದ್ದಾರೆ.

iii) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಎಲ್ಲಾ ಪ್ರಾದೇಶಿಕ ಪರಿಸರ ಅಧಿಕಾರಿಗಳಿಗೆ ಇ–ತ್ಯಾಜ್ಯ (ನಿರ್ವಹಣೆ ಮತ್ತು ನಿಭಾವಣೆ) ನಿಯಮಗಳು, 2011 ನ್ನು ಜಾರಿಗೊಳಿಸುವ ಬಗ್ಗೆ ಮತ್ತು ಇ–ತ್ಯಾಜ್ಯದ ವೈಜ್ಞಾನಿಕ ವಿಲೇವಾರಿ ಬಗ್ಗೆ ನಿರ್ದೇಶನ ನೀಡಲಾಗಿದೆ.

iv) ಇ–ತ್ಯಾಜ್ಯ (ನಿರ್ವಹಣೆ ಮತ್ತು ನಿಭಾವಣೆ) ನಿಯಮಗಳು 2011ರ ಬಗ್ಗೆ ಪುಸ್ತಕವನ್ನು ಮುದ್ರಿಸಿ ಇ–ತ್ಯಾಜ್ಯ ಉತ್ಪಾದನೆ ಹಾಗೂ ಪುನರ್ ಬಳಕೆದಾರರಿಗೆ ಹಂಚಲಾಗಿದೆ.